ಪತ್ತೆ ಮಾಡಲಾದ ವಿದ್ಯುತ್ ಕಳವು ಪ್ರಕರಣಗಳಿಗೆ ಸಂಬಂಧಿಸಿದ ಕಾರ್ಯಾಚರಣೆಯ ಬಗ್ಗೆ ವಿವಿಧ ಮಾಧ್ಯಮಗಳ ಮೂಲಕ ವ್ಯಾಪಕ ಪ್ರಚಾರ ಕೊಡುತ್ತಿದ್ದು ಸಾರ್ವಜನಿಕರಲ್ಲಿ ವಿದ್ಯುತ್ ಕಳವು ಮಾಡದಂತೆ ಮಾನಸಿಕ ಪ್ರಭಾವ ಬೀರಿ ಎಚ್ಚರಿಕೆಯ ವಾತಾವರಣ ಮೂಡಿಸಲಾಗುತ್ತಿದೆ.

ರೈತರ ಚೀನಾ ಪ್ರವಾಸ

61(217); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ

ಅ) ಪ್ರಸಕ್ತ ಸಾಲಿನಲ್ಲಿ ರೈತರನ್ನು ಕೃಷಿ ವ್ಯವಸಾಯದ ಪದ್ಧತಿಯನ್ನು ಅಧ್ಯಯನ ಮಾಡುವ ಸಲುವಾಗಿ ಚೀನಾ ದೇಶ ಪ್ರವಾಸಕ್ಕೆ ಕಳುಹಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಇದುವರೆವಿಗೂ ಪ್ರತಿ ಜಿಲ್ಲೆಯಿಂದ ಎಷ್ಟೆಷ್ಟು ರೈತರನ್ನು ಪ್ರವಾಸಕ್ಕೆ ಕಳುಹಿಸಲು ಉದ್ದೇಶಿಸಲಾಗಿದೆ; ಇದಕ್ಕಾಗಿ ತಗಲುವ ವೆಚ್ಚವೆಷ್ಟು;

ಇ) ಒಂದು ವೇಳೆ ಪ್ರಸಕ್ತ ವರ್ಷದಿಂದ ರೈತರ ಈ ಅಧ್ಯಯನ ಪ್ರವಾಸವನ್ನು ರದ್ದು ಪಡಿಸುತ್ತಿದ್ದಲ್ಲಿ, ಇದಕ್ಕೆ ಕಾರಣಗಳೇನು?

ಶ್ರೀ ಕೃಷ್ಣ ಭೈರೇಗೌಡ (ಕೃಷಿ ರಾಜ್ಯ ಸಚಿವರು)

ಅ) ಪ್ರಸಕ್ತ ಸಾಲಿನಲ್ಲಿ ವಿದೇಶ ಪ್ರವಾಸಕ್ಕೆ ಕಳುಹಿಸುವ ಕಾರ್ಯಕ್ರಮವನ್ನು ತಡೆಹಿಡಿಯಲಾಗಿದೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ದೇಶದೊಳಗಿನ ಅತ್ಯುತ್ತಮ ಬೇಸಾಯ ಕ್ರಮಗಳು, ಇತರೆ ರಾಜ್ಯಗಳಲ್ಲಿ ಅಳವಡಿಸಲಾಗುತ್ತಿರುವ ಆಧುನಿಕ ಕೃಷಿ ತಾಂತ್ರಿಕತೆಗಳು ಮತ್ತು ಸುಧಾರಿತ ಬೇಸಾಯ ಪದ್ಧತಿಗಳ ಬಗ್ಗೆ ಅರಿವು ಮೂಡಿಸಲು ರೈತರನ್ನು

ಕಳುಹಿಸಲು ಕ್ರಮ ಕೈಗೊಳ್ಳಲಾಗಿರುವುದರಿಂದ ವಿದೇಶ ಪ್ರವಾಸ ಕಾರ್ಯಕ್ರಮವನ್ನು ತಡೆಹಿಡಿಯಲಾಗಿದೆ.

ತೋಟಗಾರಿಕೆ ವಿಜ್ಞಾನಿಗಳ ವಿಶ್ವವಿದ್ಯಾಲಯ ಕಾರ್ಯ ಚಟುವಟಿಕೆಗಳು

62(193); ಶ್ರೀ ಹ್ಯಾರಿಸ್.ಎನ್.ಎ

ಅ) ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಅಸ್ತಿತ್ವಕ್ಕೆ ಬಂದಾಗಿನಿಂದ ತೋಟಗಾರಿಕೆ ಬೆಳೆಗಳ ಮಹತ್ವ ಸಂಶೋಧನೆ, ವಿಸ್ತರಣೆ ಮತ್ತು ಶಿಕ್ಷಣವನ್ನು ನೀಡುವಲ್ಲಿ ಹಮ್ಮಿಕೊಂಡ ಗುರಿ ಮತ್ತು ಸಾಧನೆಗಳ ವಿವರಗೇನು;

ಆ) ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ತೋಟಗಾರಿಕೆ ವಿಶ್ವವಿದ್ಯಾಲಯದಕ್ಕೆ ಈ ಅವಧಿಯಲ್ಲಿ ಮಂಜೂರು ಮಾಡಿದ ಅನುದಾನದ ಮೊತ್ತ ಎಷ್ಟು;

ಇ) ಉತ್ತರ ಕರ್ನಾಟಕ ಭಾಗದಲ್ಲಿ ತೋಟಗಾರಿಕೆ ಬೆಳೆಗಳ ವಲಯಕ್ಕೆ ವಿಶ್ವವಿದ್ಯಾಲಯ ಸಲ್ಲಿಸಿದ ಸೇವೆ ಮತ್ತು ಭಾಗದ ಜನರಿಗೆ ನೂತನ ತೋಟಗಾರಿಕೆ ಕುರಿತ ಶಿಕ್ಷಣ ಮತ್ತು ಮಾರುಕಟ್ಟೆ ಅಭಿವೃದ್ಧಿ ನಿಟ್ಟಿನಲ್ಲಿ ವಿಶ್ವವಿದ್ಯಾಲಯದ ಗಣನೀಯ ಕೊಡುಗೆ ಏನು (ವಿವರ ಒದಗಿಸುವುದು)?

ಡಾ॥ ಶಾಮನೂರು ಶಿವಶಂಕರಪ್ಪ (ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರು)

ಅ) ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ, ಸಂಶೋಧನಾ ನಿರ್ದೇಶನಾಲಯ, ರೈತ ಸಮುದಾಯವು ವಿವಿಧ ತೋಟಗಾರಿಕೆ ಬೆಳೆಗಳಲ್ಲಿ ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಂಡು ಹಿಡಿಯುವ ನಿಟ್ಟಿನಲ್ಲಿ ವಿಶೇಷ ಗಮನ ಹರಿಸುತ್ತ ಬಂದಿದೆ. ತನ್ನ ವ್ಯಾಪ್ತಿಯಲ್ಲಿ ರಾಜ್ಯಾದ್ಯಂತ 10 ಸಂಶೋಧನಾ ಕೇಂದ್ರಗಳನ್ನು ಹಾಗೂ 12 ಅಖಿಲ ಭಾರತ ಸಮನ್ವಯ ಸಂಶೋಧನಾ ಯೋಜನೆಗಳನ್ನು ಹೊಂದಿದ್ದು, ಆಯಾ ಪ್ರದೇಶಗಳಲ್ಲಿ ಸ್ಥಾನಿಕವಾಗಿ ಪ್ರಮುಖವಾಗಿರುವ ತೋಟಗಾರಿಕೆ ಬೆಳೆಗಳಲ್ಲಿರುವ ಸಮಸ್ಯೆಗಳನ್ನು, ರೈತರು ಹಾಗೂ